I/244254/2022

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕೋಲಾರ ಜಿಲ್ಲೆ, ಶ್ರೀನಿವಾಸಪುರ ವಿ.ಸ ಕ್ಷೇತ್ರದ ವ್ಯಾಪ್ತಿಯ ಅಭಿವೃದ್ಧಿ ಕಾಮಗಾರಿಗಳ ಕ್ರಿಯಾ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 541 ವೆಚ್ಚ-6, 2021 ದಿನಾಂಕ:01.12.2021.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಅನುಮೋದಿಸಿದಂತೆ.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 277 ಆರ್‌ಆರ್‌ಸಿ 2021 ದಿನಾಂಕ:31.12.2021.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕೋಲಾರ ರವರ ಪತ್ರ ಸಂಖ್ಯೆ: ಜಿಪಂಕೋ/3054 ರಸ್ತೆಗಳು/ಸಿಆರ್.01/2021-22 ದಿನಾಂಕ:14.03.2022

**ಪ್ರಸ್ತಾವನೆ:**

2021-22ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ರೂ.1184.50 ಲಕ್ಷಗಳ ಮೊತ್ತದಲ್ಲಿ ಕೈಗೊಳ್ಳಲು ಪ್ರಸ್ತಾವನೆಯನ್ನು ಗಮನಿಸಿದೆ.

ಓದಲಾದ-1 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಕೋಲಾರ ಜಿಲ್ಲೆಯ ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿಪಡಿಸಲು ರೂ.1184.50 ಲಕ್ಷಗಳನ್ನು ಹಂಚಿಕೆ ಮಾಡಲು ಆದೇಶಿಸಿರುವ ಮೇರೆಗೆ ಆರ್ಥಿಕ ಇಲಾಖೆಯು ಕಾಮಗಾರಿಗಳು ರೂ.1184.50 ಲಕ್ಷಗಳ ಮೊತ್ತದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಸಹಮತಿಸಿರುತ್ತದೆ.

ಓದಲಾದ-2 ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಕೋಲಾರ ಜಿಲ್ಲೆಯ ಶ್ರೀನಿವಾಸಪುರ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿಪಡಿಸಲು ರೂ.1184.50 ಲಕ್ಷಗಳನ್ನು ಹಂಚಿಕೆ ಮಾಡಿರುವುದನ್ನು ಅನುಮೋದಿಸಿದ್ದು, ಮಾನ್ಯ ಶಾಸಕರು, ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರರವರೊಂದಿಗೆ ಸಮಾಲೋಚಿಸಿ ಕಾಮಗಾರಿಗಳ ವಿವರಗಳನ್ನು ಪಡೆದು ಷರತ್ತುಬದ್ಧವಾಗಿ ನಿಯಮಾನುಸಾರ ಪರಿಶೀಲಿಸಿ ಆಡಳಿತಾತ್ಮಕ ಅನುಮೋದನೆಗೆ ಸರ್ಕಾರಕ್ಕೆ ಸಲ್ಲಿಸಲು ಓದಲಾದ-3 ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೋಲಾರ ಜಿಲ್ಲಾ ಪಂಚಾಯಿತಿ ರವರನ್ನು ಕೋರಲಾಗಿತ್ತು.

ಓದಲಾದ-3 ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೋಲಾರ ಜಿಲ್ಲಾ ಪಂಚಾಯಿತಿ ರವರು ಕೋಲಾರ ಜಿಲ್ಲೆಯ ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಂಚಿಕೆ ಮಾಡಿರುವ ರೂ.1184.50 ಲಕ್ಷಗಳ ಪೈಕಿ ರೂ.500.00 ಲಕ್ಷ ಮೊತ್ತದ 11 ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿ ಕ್ರಿಯಾ ಯೋಜನೆಯನ್ನು ಸಲ್ಲಿಸಿರುತ್ತಾರೆ.

ಅದರಂತೆ, 2021-22ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ 11 ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ರೂ.500.00 ಲಕ್ಷಗಳ ಮೊತ್ತದಲ್ಲಿ ಪಂಚಾಯತ್ ರಾಜ್ ಇಲಾಖೆ ಮೂಲಕ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಅದರಂತೆ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ : 277 : ಆರ್ ಆರ್ ಸಿ : 2021, ( ಇ -591170) ಬೆಂಗಳೂರು, ದಿನಾಂಕ:08.04.2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2021-22ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ರೂ.**500.00** ಲಕ್ಷಗಳ (ರೂಪಾಯಿ ಐದು ನೂರು ಲಕ್ಷಗಳು ಮಾತ್ರ) ಮೊತ್ತದಲ್ಲಿ ಈ ಕೆಳಕಂಡ ಷರತ್ತಿಗೊಳಪಟ್ಟು **ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ** ಮೂಲಕ ಅನುಷ್ಠಾನ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

8/4/22

(ರೂ. ಲಕ್ಷಗಳಲ್ಲಿ)

| ಕ್ರ.ಸಂ | ತಾಲ್ಲೂಕಿನ ಹೆಸರು | ಪಂಚಾಯಿತಿ ಹೆಸರು | ರಸ್ತೆಗಳ ವಿವರ | DRRP No | ಒಟ್ಟು ಉದ್ದ (ಕಿ.ಮೀ) | ಅಂದಾಜು ಮೊತ್ತ |
|---|---|---|---|---|---|---|
| 1 | ಶ್ರೀನಿವಾಸಪುರ | ರಾಯಲ್ಪಾಡು | ರಾಯಲ್ಪಾಡುಯಿಂದ ಬಸನಪಲ್ಲಿ ರಸ್ತೆ ಅಭಿವೃದ್ಧಿ | ವಿಆರ್ 23 | 1.87 | 70.88 |
| 2 | ಶ್ರೀನಿವಾಸಪುರ | ರಾಯಲ್ಪಾಡು | ಹೆಚ್.ಜಿ ರಸ್ತೆಯಿಂದ ಸಾಕಮ್ಮ ದೇವಾಲಯ ರಸ್ತೆ ಅಭಿವೃದ್ಧಿ | ವಿಆರ್ 26 | 1.40 | 35.29 |
| 3 | ಶ್ರೀನಿವಾಸಪುರ | ಗೌನಿಪಲ್ಲಿ | ಕೆ.ಎಂ ರಸ್ತೆಯಿಂದ ಚಿಂತಾಮಣಿ ಗಡಿಯವರೆಗೆ ವಯಾ ಪಾಪಶೆಟ್ಟಿಪಲ್ಲಿ ಮತ್ತು ಕೋಟಿಕಲ್ಲೂರು ರಸ್ತೆ ಅಭಿವೃದ್ಧಿ | ವಿಆರ್ 361 & ವಿಆರ್ 226 | 3.71 | 41.78 |
| 4 | ಶ್ರೀನಿವಾಸಪುರ | ಹೊದಲಿ | ಎಸ್ ಪಿ ರಸ್ತೆಯಿಂದ ಹೊಗಳಗೆರೆ ವಯಾ ಚೊಕ್ಕನಹಳ್ಳಿ ಮತ್ತು ತಿನಲ್ಲಿ ರಸ್ತೆ ಅಭಿವೃದ್ಧಿ | ವಿಆರ್ 81 | 3.50 | 65.81 |
| 5 | ಶ್ರೀನಿವಾಸಪುರ | ಆರಿಕುಂಟೆ | ನಾಗದೇಪಲ್ಲಿ ಗ್ರಾಮದಲ್ಲಿ ರಸ್ತೆ ಅಭಿವೃದ್ಧಿ | ವಿಆರ್ 374 | 0.60 | 40.00 |
| 6 | ಶ್ರೀನಿವಾಸಪುರ | ಜಿ. ತಿಮ್ಮಸಂದ್ರ | ಆಲವಟ್ಟ ಗ್ರಾಮದಿಂದ ಮದನಪಲ್ಲಿ ರಸ್ತೆ ಅಭಿವೃದ್ಧಿ | ವಿಆರ್ 374 | 1.00 | 41.25 |
| 7 | ಶ್ರೀನಿವಾಸಪುರ | ಮಾಸ್ತೇನಹಳ್ಳಿ | ಗಾಂಡ್ಲಹಳ್ಳಿಯಿಂದ ನೂಲಪುರ ರಸ್ತೆ ಅಭಿವೃದ್ಧಿ | ವಿಆರ್ 132 | 0.98 | 20.00 |
| 8 | ಶ್ರೀನಿವಾಸಪುರ | ಮಾಸ್ತೇನಹಳ್ಳಿ | ಗುಮ್ಮರೆಡ್ಡಿಪುರಯಿಂದ ಅಣ್ಣೇನಹಳ್ಳಿ | ವಿಆರ್ 11 | 1.00 | 20.00 |
| 9 | ಕೋಲಾರ | ಹೊಳೂರು | ಹೋಳೂರುಯಿಂದ ಐತರಾಸನಹಳ್ಳಿ ರಸ್ತೆ ಅಭಿವೃದ್ಧಿ | ವಿಆರ್ 21 | 3.87 | 125.38 |
| 10 | ಕೋಲಾರ | ಮುದುವಾಡಿ | ವಾನರಾಶಿಯಿಂದ ವೆಂಕಟಾಪುರ ರಸ್ತೆ ಅಭಿವೃದ್ಧಿ | ವಿಆರ್ 437 | 0.80 | 24.33 |
| 11 | ಕೋಲಾರ | ಸುಗಟೂರು | ಸುಗಟೂರು ಗ್ರಾಮದ ಸಭರಮತಿ ಶಾಲೆಯಿಂದ ಗೌಡಹಳ್ಳಿ ವರೆಗಿನ ರಸ್ತೆ ಅಭಿವೃದ್ಧಿ | ವಿಆರ್ 425 | 0.80 | 15.28 |
| | | | **ಒಟ್ಟು** | | | **500.00** |

**ಷರತ್ತುಗಳು:**

1. ಈ ಮೇಲಿನ ರಸ್ತೆ ಕಾಮಗಾರಿಯು ಜಿಲ್ಲಾ ಪಂಚಾಯತಿ /ಕೆಆರ್ಐಡಿಎಲ್, ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.

2. ಈ ಕಾಮಗಾರಿಗಳನ್ನು **ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ** ಮೂಲಕ ಅನುಷ್ಠಾನ ಮಾಡತಕ್ಕದ್ದು.

3. ಮೇಲಿನ 11 ಕಾಮಗಾರಿಯು ಡಿಆರ್ಆರ್‌ಪಿ ಪಟ್ಟಿಯಲ್ಲಿದ್ದು ಮತ್ತು ಅಭಿವೃದ್ಧಿ ಪಡಿಸಲು ಅರ್ಹವಾಗಿರುವುದನ್ನು ಖಚಿತಪಡಿಸಿಕೊಂಡು ರಸ್ತೆಯ ಉದ್ದ ಹಾಗೂ ಸೇತುವೆಗಳ ಅವಶ್ಯವಿರುವುದನ್ನು ಸ್ಥಳ ಪರಿಶೀಲನೆ ಮಾಡಿಕೊಂಡು, ವಾಸ್ತವಿಕವಾಗಿ ಪ್ರತಿ ಕಾಮಗಾರಿಗೆ ಬೇಕಾಗಿರುವ ವೆಚ್ಚಕ್ಕೆ ತಕ್ಕಂತೆ ಅಂದಾಜು ಪಟ್ಟಿಯನ್ನು ತಯಾರಿಸಿಕೊಂಡು ಸಕ್ಷಮ ಪ್ರಾಧಿಕಾರದ ತಾಂತ್ರಿಕ ಅನುಮೋದನೆಯನ್ನು ಪಡೆಯತಕ್ಕದ್ದು.

3. ಡಿಪಿಆರ್‌ನ್ನು ತಯಾರಿಸುವಾಗ ಪ್ರತಿ ಕಿ.ಮೀ.ಗೆ ತಗಲುವ ವೆಚ್ಚದ ಮಾಹಿತಿಯನ್ನು ನಮೂದಿಸುವುದು,

8/4/22

ವಿ.ಆರ್. ಸಂಖ್ಯೆ ಹಾಗೂ ಅಳವಡಿಸುವ ಹಾಗೂ Latitude - Longitude ಅನ್ನು ನಮೂದಿಸುವುದು.

4. ಈ ಆದೇಶದಲ್ಲಿನ ಕಾಮಗಾರಿಗಳನ್ನು ಸ್ಥಳ ಪರಿಶೀಲಿಸಿ, ವಾಸ್ತವಿಕವಾಗಿ ಅಂದಾಜುಪಟ್ಟಿ ಸಿದ್ಧಪಡಿಸಿದ ನಂತರ ಉಳಿಕೆಯಾದ ಅನುದಾನದ ಬಗ್ಗೆ ಸರ್ಕಾರಕ್ಕೆ ಮಾಹಿತಿ ಸಲ್ಲಿಸುವುದು.
5. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯ ಅಂದಾಜನ್ನು ನಿಯಮಾನುಸಾರ IRC ಮತ್ತಿತರೆ ತತ್ಸಮಾನ ತಾಂತ್ರಿಕ ನಿಬಂಧನೆಗಳಂತೆ ಪರಿಶೀಲನೆಗೆ ಒಳಪಡಿಸಿ ಸೂಕ್ತ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.
5. ಡಿಪಿಆರ್ ತಯಾರಿಸುವಾಗ ಪ್ರತಿ 100.00 ಮೀ.ಗಳ ಛಾಯಾಚಿತ್ರವನ್ನು ಅಳವಡಿಸುವುದು ಕಡ್ಡಾಯವಾಗಿರುತ್ತದೆ.
6. ಕಾಮಗಾರಿಗಳನ್ನು ಕರ್ನಾಟಕ ಪಾರದರ್ಶಕತೆ ಕಾಯಿದೆ (ಕೆಟಿಪಿಪಿ) ಪ್ರಕಾರ ಟೆಂಡರ್ ಕರೆದು ಅನುಷ್ಠಾನ ಮಾಡತಕ್ಕದ್ದು.
7. ಪ್ರಸ್ತುತ ಈ ಲೆಕ್ಕ ಶೀರ್ಷಿಕೆಯಡಿ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸುತ್ತಿರುವ ಹೆಚ್ಚುವರಿ ರಸ್ತೆ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ ಮುಖಾಂತರ ಉಸ್ತುವಾರಿ ಮಾಡಬೇಕಾಗಿದ್ದು, ಈ ಸಂಬಂಧ ಕಾಮಗಾರಿಗಳ ಪೂರ್ಣ ಮಾಹಿತಿಯನ್ನು ಗಾಂಧಿ ಸಾಕ್ಷಿ ಕಾಯಕ ವೆಬ್ ಸೈಟ್‌ನಲ್ಲಿ ತಪ್ಪದೇ ಅಳವಡಿಸುವುದು.
8. ಕಾಮಗಾರಿ ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ರಸ್ತೆಯ ಛಾಯಾಚಿತ್ರಗಳನ್ನು ತೆಗೆದು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸತಕ್ಕದ್ದು.
9. ಕಾಮಗಾರಿಗಳನ್ನು 3rd party/SQM/DQM ರವರಿಂದ Three tire ತಪಾಸಣೆಗೆ ಒಳಪಡಿಸತಕ್ಕದ್ದು.
10. ಎಲ್ಲಾ ಕಾಮಗಾರಿಗಳ ಪ್ರಗತಿ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಮಾಡತಕ್ಕದ್ದು.
11. ಸದರಿ ರಸ್ತೆಯು ನಿರ್ಮಾಣದ ನಂತರ 01 ವರ್ಷದ ನಿರ್ವಹಣೆ ಒಳಗೊಂಡಿರತಕ್ಕದ್ದು, ನಿರ್ವಹಣೆಗಾಗಿ ಯಾವುದೇ ಹೆಚ್ಚುವರಿ ಅನುದಾನ ನೀಡಲಾಗುವುದಿಲ್ಲ.
12. ಎಲ್ಲಾ ಅಂಶಗಳನ್ನು ಮುಖ್ಯ ನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ರವರು ಗಮನಿಸಿ, ದೃಢೀಕರಿಸಿ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವುದು. ಈ ಸೂಚನೆಗಳನ್ನು ನಿರ್ಲಕ್ಷಿಸುವವರನ್ನು ಜವಾಬ್ದಾರರನ್ನಾಗಿ ಹಾಗೂ ಹೊಣೆಗಾರರನ್ನಾಗಿ ಮಾಡಲಾಗುವುದು.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**Signed by Shrinivas H Marangappanavar**
**Date: 08-04-2022 12:42:41**

8/4/22

**(ಶ್ರೀನಿವಾಸ ಹ. ಮಾರಂಗಪ್ಪನವರ)**
ನಿರ್ದೇಶಕರು (ಗ್ರಾಮೀಣಾಭಿವೃದ್ಧಿ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕ ಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ , ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU) (IF), 5ನೇ ಹಂತ, ಬಹುಮಹಡಿಗಳ ಕಟ್ಟಡ,

ಬೆಂಗಳೂರು.

7. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು,ಖಜಾನೆ ಇಲಾಖೆ, ಬೆಂಗಳೂರು.
12. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ , ಟ್ರೆಜರಿ ಡಿಪಾರ್ಟ್ ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
13. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು
15. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಬೆಂಗಳೂರು
16. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕೋಲಾರ ಜಿಲ್ಲಾ ಪಂಚಾಯತಿ.
17. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು
18. ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ.
19. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.